ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳು ಅನುತ್ತೀರ್ಣರಾದ ನಂತರ ಅವರಿಗೆ ಪುನಃ ಅವಕಾಶ ಕೊಡುವುದು.

1967(1839)

ಶ್ರೀ ಪ್ರಭಾಕರ ಬಂಗೇರ.ಕೆ.(ಬೆಳ್ತಂಗಡಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ವಿದ್ಯಾರ್ಜನೆ ಮಾಡುತ್ತಿರುವ ವಿದ್ಯಾರ್ಥಿಗಳು ಅನುತ್ತೀರ್ಣರಾದರೆ ಪುನಃ ಪರೀಕ್ಷೆಗೆ ಹಾಜರಾಗಲು ಅನುಕೂಲವಾಗುವಂತೆ ವಸತಿನಿಲಯಗಳಲ್ಲಿಯೇ ಅವಕಾಶವನ್ನು ಮುಂದುವರೆಸಲಾಗುತ್ತಿದೆಯೇ?

ಆ) ಕೆಲವು ವಸತಿ ನಿಲಯಗಳಲ್ಲಿ ವಾಸ್ತವ್ಯ ಅವಕಾಶಗಳನ್ನು ನಿರಾಕರಿಸುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದ್ದು ಈ ಬಗ್ಗೆ ಸೂಕ್ತ ವ್ಯವಸ್ಥೆಯನ್ನು ಸರ್ಕಾರವು ಮಾಡಿಕೊಡಲಿಚ್ಚಿಸುತ್ತದೆಯೇ?

ಇ) ವಸತಿನಿಲಯದ ವಿದ್ಯಾರ್ಥಿಗಳು ಅನುತ್ತೀರ್ಣರಾದ ಸಂದರ್ಭದಲ್ಲಿ ಉತ್ತೀರ್ಣರಾಗುವವರೆಗೂ ನಿಗದಿತ ಸಮಯದವರೆಗೂ ವಸತಿ ನಿಲಯಗಳಲ್ಲಿ ಅವಕಾಶವನ್ನು ಸರ್ಕಾರದವರು ಕಲ್ಪಿಸಿಕೊಡಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) **ಸಮಾಜ ಕಲ್ಯಾಣ ಇಲಾಖೆ:**

ವಿದ್ಯಾರ್ಥಿಗಳು ಅನುತ್ತೀರ್ಣರಾದರೆ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಸ್ಥಾನಗಳಿದ್ದಲ್ಲಿ ಒಂದು ಸಲ ಅವಕಾಶ ಕಲ್ಪಿಸಲಾಗುತ್ತದೆ.

ಹಿಂದುಳಿದ ವರ್ಗಗಳ ಇಲಾಖೆ:

ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ:

ಪರಿಶಿಷ್ಟ ವರ್ಗದ ಹೆಣ್ಣು ಮಕ್ಕಳು ಶೈಕ್ಷಣಿಕ ಮಟ್ಟದಲ್ಲಿ ತೀರಾ ಹಿಂದುಳಿದಿರುವ ಕಾರಣ ಒಂದು ಸಲ ಅನುತ್ತೀರ್ಣರಾದ ವಿದ್ಯಾರ್ಥಿನಿಯರಿಗೆ ಮಾತ್ರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.

ಅಲ್ಪಸಂಖ್ಯಾತರ ಇಲಾಖೆ:

ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಆ) **ಸಮಾಜ ಕಲ್ಯಾಣ ಇಲಾಖೆ:**

ಪ್ರವೇಶಾವಕಾಶವನ್ನು ನಿರಾಕರಿಸುತ್ತಿರುವುದಿಲ್ಲ.

ಹಿಂದುಳಿದ ವರ್ಗಗಳ ಇಲಾಖೆ:

ಉದ್ಭವಿಸುವುದಿಲ್ಲ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ:

ಪರಿಶಿಷ್ಟ ವರ್ಗದ ಹೆಣ್ಣು ಮಕ್ಕಳು ಶೈಕ್ಷಣಿಕ ಮಟ್ಟದಲ್ಲಿ ತೀರಾ ಹಿಂದುಳಿದಿರುವ ಕಾರಣ ಒಂದು ಸಲ ಅನುತ್ತೀರ್ಣರಾದ ವಿದ್ಯಾರ್ಥಿನಿಯರಿಗೆ ಮಾತ್ರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.

ಅಲ್ಪಸಂಖ್ಯಾತರ ಇಲಾಖೆ:

ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಇ) **ಸಮಾಜ ಕಲ್ಯಾಣ ಇಲಾಖೆ:**

ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಸ್ಥಳಾವಕಾಶವನ್ನು ಒದಗಿಸಬೇಕಾಗಿರುವುದರಿಂದ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಕಲ್ಪಿಸಲು ಸಾಧ್ಯವಾಗುವುದಿಲ್ಲ.

ಹಿಂದುಳಿದ ವರ್ಗಗಳ ಇಲಾಖೆ:

ಉದ್ಭವಿಸುವುದಿಲ್ಲ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ:

ಸಾಧ್ಯವಾಗುವುದಿಲ್ಲ.

ಅಲ್ಪಸಂಖ್ಯಾರ ಇಲಾಖೆ:

ಸಾಧ್ಯವಾಗುವುದಿಲ್ಲ.